**ದಿನಾಂಕ: 20.08.2022 ರಂದು ಬೆಳಿಗ್ಗೆ 11.30ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್–178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್–19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

### : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 178ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬೆಸ್ಕಾಂ |
| ಸದಸ್ಯರುಗಳು | ತೋಟಗಾರಿಕಾ ಇಲಾಖೆಯ ಅಧಿಕಾರಿಗಳು |
| ಸದಸ್ಯರುಗಳು | ಅರಣ್ಯ ಇಲಾಖೆ ಅಧಿಕಾರಿಗಳು |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು |
| ಸದಸ್ಯರುಗಳು | ಜೆ.ಪಿ.ನಗರ ಪೊಲೀಸ್ ಠಾಣಾ ಅಧಿಕಾರಿಗಳು |
| ಸದಸ್ಯರುಗಳು | ವಾರ್ಡ್ 178 ರ UPHC ನ ವೈದ್ಯರು |
| ಸದಸ್ಯರುಗಳು | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| ಸಾರ್ವಜನಿಕರು | ಮಾರ್ಷಲ್ |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ವಾರ್ಡ್ ವ್ಯಾಪ್ತಿಯ 22ನೇ ಮುಖ್ಯರಸ್ತೆ, ಜೆ.ಪಿ.ನಗರ 2ನೇ ಹಂತದಲ್ಲಿ ರಸ್ತೆ ಗುಂಡಿ ಬಿದ್ದಿದ್ದು, ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಕೂಡಲೇ ರಸ್ತೆ ಗುಂಡಿಯನ್ನು ಮುಚ್ಚುವಂತೆ ಹಾಗೂ 23ನೇ ಮುಖ್ಯರಸ್ತೆ, 12ನೇ ಅಡ್ಡರಸ್ತೆಯ ಜಂಕ್ಷನ್‌ಗಳಲ್ಲಿ ಕೇಬಲ್ ವೈರ್‌ಗಳು ನೇತಾಡುತ್ತಿದ್ದು, ಅದನ್ನು ತೆರವುಗೊಳಿಸಲು, ನಂ. 802/12, 22ನೇ ಮುಖ್ಯರಸ್ತೆ, ಜ.ಪಿ.ನಗರ 2ನೇ ಹಂತ ಈ ವಿಳಾಸದ ಖಾಲಿ ನಿವೇಶನದಲ್ಲಿ ಕಸ ಮತ್ತು ಡೇಬ್ರೀಸ್‌ನ್ನು ಹಾಕಿರುವುದರಿಂದ ಇದನ್ನು ಕೂಡಲೇ ತೆರವುಗೊಳಿಸುವಂತೆ, 21ನೇ ಮುಖ್ಯರಸ್ತೆ, 12ನೇ ಅಡ್ಡರಸ್ತೆಯಲ್ಲಿರುವ ಪಾದಚಾರಿ ಮಾರ್ಗವು ಹಾಳಾಗಿದ್ದು, ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿದ್ದು, ಕೂಡಲೇ ಸರಿಪಡಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

ಕ್ರಮ:–ಸ.ಕಾ.ನಿ.ಅ., ಜೆ.ಪಿ.ನಗರ ಉಪವಿಭಾಗ

- ವಾರ್ಡ್ ವ್ಯಾಪ್ತಿಯ ಹಲವು ಕಡೆಗಳಲ್ಲಿ ಬೀದಿ ದೀಪದ ಕಂಬಗಳಲ್ಲಿ ವೈರ್‌ಗಳು ಓಪನ್ ಬಿಟ್ಟಿರುವುದು ಅಪಾಯಕಾರಿಯಾಗಿದ್ದು, ಅವುಗಳಿಗೆ ಸ್ವಿಚ್‌ಗಳನ್ನು ಅಳವಡಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ : ಸ.ಕಾ.ನಿ.ಅ., ಬೀದಿ ದೀಪ ನಿರ್ವಹಣೆ ವಿಭಾಗ**

- ವಾರ್ಡ್ ವ್ಯಾಪ್ತಿಯ ನಂ. 737, 22ನೇ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳಿಗೆ ಮರದ ರೆಂಬೆ ಕೊಂಬೆಗಳು ಅಡ್ಡಲಾಗಿದ್ದು, ಇದನ್ನು ಕೂಡಲೇ ಕತ್ತರಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ : ಅರಣ್ಯ ಸಂರಕ್ಷಣಾಧಿಕಾರಿಗಳು, ದಕ್ಷಿಣ**

- ಸಾರಕ್ಕಿ ಅಗ್ರಹಾರ ವ್ಯಾಪ್ತಿಯಲ್ಲಿ ಹೆಗ್ಗಣ ಕಾಟ ಜಾಸ್ತಿಯಾಗಿದ್ದು, ಇವುಗಳನ್ನು ತಡೆಗಟ್ಟುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ:- ಹಿರಿಯ ಆರೋಗ್ಯ ಪರಿವೀಕ್ಷಕರು (ಜಯನಗರ)**

- ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡಿರುವವರ ಮೇಲೆ ದಂಡವನ್ನು ವಿಧಿಸಬೇಕೆಂದು ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ : ಜಯನಗರ ಸಂಚಾರಿ ಪೊಲೀಸ್ ಠಾಣೆ**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಇಂಜಿನಿಯರ್‌ರಾದ ಶ್ರೀ ಅಶ್ವತ್‌ರಾಮನ್ .ಆರ್, ವಾರ್ಡ್ 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ವಾರ್ಡ್178 ರ ಸಹಾಯಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ